ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/10/ಸಿಸಿಟೆಕ್/2017-18 /3106

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ: 21-02-2019

## -: ಸುತ್ತೋಲೆ :-

ವಿಷಯ: ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಿಸಿಟೆಕ್ ಉಪಘಟಕ ಸ್ಥಾಪನೆಗೊಂಡ ವರ್ಷದಿಂದ 2018-19ನೇ ಸಾಲಿನವರೆಗೆ ಆಯೋಜಿಸಿರುವ/ಆಯೋಜಿಸುತ್ತಿರುವ ಅಲ್ಪಾವಧಿ ತರಬೇತಿಗಳ/ಇತರೆ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಲೆಕ್ಕ ಪತ್ರಗಳ ಆಡಿಟ್ ವರದಿಯನ್ನು ಸಲ್ಲಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಿಸಿಟೆಕ್ ಉಪಘಟಕ ಸ್ಥಾಪನೆಗೊಂಡ ವರ್ಷದಿಂದ 2018-19ನೇ ಸಾಲಿನವರೆಗೆ ಆಯೋಜಿಸಿರುವ/ಆಯೋಜಿಸುತ್ತಿರುವ ಅಲ್ಪಾವಧಿ ತರಬೇತಿಗಳ/ಇತರೆ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಲೆಕ್ಕ ಪತ್ರಗಳನ್ನು ಆಡಿಟ್ ಮಾಡಿಸದಿರುವುದು ಇಲಾಖೆಯ/ಮಹಾಲೇಖಪಾಲರ ಗಮನಕ್ಕೆ ಬಂದಿರುತ್ತದೆ. ಅದ ಕಾರಣ ಸಿಸಿಟೆಕ್ ಉಪಘಟಕ ಸ್ಥಾಪನೆಗೊಂಡ ವರ್ಷದಿಂದ 2018-19ನೇ ಸಾಲಿನವರೆಗೆ ಸಿಸಿಟೆಕ್ ಉಪಘಟಕಕ್ಕೆ ಸಂಬಂಧಿಸಿದ ಲೆಕ್ಕ ಪತ್ರಗಳನ್ನು Chartered Accountants ರವರಿಂದ ಅತಿ ಜರೂರಾಗಿ ಆಡಿಟ್ ಮಾಡಿಸಿರುವ/ಮಾಡಿಸುವ ಆಡಿಟ್ ವರದಿಗಳ ಪ್ರತಿಯನ್ನು ಏಪ್ರಿಲ್ 2019ರೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸಂಬಂಧಪಟ್ಟ ಸಂಸ್ಥೆಗಳ ಪ್ರಾಚಾರ್ಯರು ಸೂಕ್ತ ಕ್ರಮವಹಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸಿಸಿಟೆಕ್ ಉಪಘಟಕಕ್ಕೆ ಸಂಬಂಧಿಸಿದ ಲೆಕ್ಕ ಪತ್ರಗಳನ್ನು ಪ್ರತಿ ಆರ್ಥಿಕ ವರ್ಷ ಆಡಿಟ್ ಮಾಡಿಸಿ, ಸದರಿ ಆಡಿಟ್ ವರದಿಯ ಪ್ರತಿಯನ್ನು ಏಪ್ರಿಲ್ ತಿಂಗಳೊಳಗಾಗಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸಂಬಂಧಪಟ್ಟ ಸಂಸ್ಥೆಗಳ ಪ್ರಾಚಾರ್ಯರು ಸೂಕ್ತ ಕ್ರಮವಹಿಸಬೇಕೆಂದು ಸಹ ಸೂಚಿಸಲಾಗಿದೆ.

21.2.19

ಜಂಟಿ ನಿರ್ದೇಶಕರು(ಸಿಡಿಸಿ)

21/2/19

ಇವರಿಗೆ:-

1. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗ, ತಾಂ.ಶಿ.ನಿ, ಬೆಂಗಳೂರು, ಡಿ.ಟಿ.ಇ. ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.